# ಸಹಕಾರ ಕ್ಷೇತ್ರಕ್ಕೆ ತಮಗೆ ಆದರದ ಸ್ವಾಗತ



# ಸಹಕಾರ ಕ್ಷೇತ್ರದ ಪರಿಚಯ

**ಸಹಕಾರ ಎಂದರೆ:**

ಒಂದು ಕೆಲಸದಲ್ಲಿ ಒಬ್ಬರಿಗೆ ಇನ್ನೊಬ್ಬರು ನೆರವು ನೀಡುವುದು. ಕೂಡಿ ಕೆಲಸ ಮಾಡುವುದು, ಒಟ್ಟಿಗೆ ಕಾರ್ಯನಿರ್ವಹಿಸುವುದು ಎಂಬ ಅರ್ಥ ಬರುತ್ತದೆ.

**ಸಹಕಾರ ಸಂಘ / ಸಹಕಾರಿ ಎಂದರೆ:**

ಕೆಲವು ಸಮಾನ ಮನಸ್ಕರು , ಸಮಾನತೆಯ ತಳಹದಿಯ ಮೇಲೆ, ಒಂದು ಸಾಮಾನ್ಯ ಆರ್ಥಿಕ ಚಟುವಟಿಕೆಯ ಕಾರ್ಯ ಸಾಧನೆಗಾಗಿ ಒಂದುಗೂಡಿ, ನಿಯಮಾನುಸಾರ ಕಾರ್ಯನಿರ್ವಹಿಸುವುದೇ ಸಹಕಾರ ಸಂಘ/ಸೌಹಾರ್ದ ಸಹಕಾರಿ ಎನ್ನಬಹುದಾಗಿದೆ.

# ಸಹಕಾರಿ ತತ್ವಗಳು

"ತಾನು ಎಲ್ಲರಿಗಾಗಿ ಎಲ್ಲರೂ ತನಗಾಗಿ" ಎಂಬುದು ಸಹಕಾರದ ಮೂಲತತ್ವ

**ಸಹಕಾರಿ ತತ್ವಗಳು 7:**

* ಮುಕ್ತ ಹಾಗೂ ಸ್ವಯಂ ಪ್ರೇರಿತ ಸದಸ್ಯತ್ವ
* ಪ್ರಜಾಸತ್ತಾತ್ಮಕ ಸದಸ್ಯರ ಹತೋಟಿ
* ಆರ್ಥಿಕ ಚಟುವಟಿಕೆಗಳಲ್ಲಿ ಸದಸ್ಯರ ಪಾಲು
* ಸ್ವಾಯತ್ತತೆ ಮತ್ತು ಸ್ವಾತಂತ್ರ್ಯ
* ಸಹಕಾರ ಶಿಕ್ಷಣ, ತರಬೇತಿ ಮತ್ತು ಪ್ರಚಾರ
* ಸಹಕಾರಿಗಳಲ್ಲಿ ಪರಸ್ಪರ ಕ್ರಿಯಾತ್ಮಕ ಸಹಕಾರ
* ಸಮಾಜಿಕ ಕಳಕಳಿ.

# ವಿದೇಶದಲ್ಲಿ ಸಹಕಾರ ಚಳುವಳಿ:

ವಿದೇಶದ ಸಹಕಾರ ಚಳುವಳಿಯ ಅಗ್ರಸ್ಥಾನ ರಾಬರ್ಟ್ ಒವೆನ್‌ಗೆ ಸಲ್ಲುತ್ತದೆ.

ಇವರನ್ನು ಸಹಕಾರದ ಪಿತಾಮಹ ಎಂದು ಗುರುತಿಸಲಾಗಿದೆ.

ಕೈಗಾರಿಕಾ ಕ್ರಾಂತಿಯಾದ ನಂತರ ಶ್ರೀಮಂತ ಮತ್ತು ಕಾರ್ಮಿಕ ವರ್ಗ ಎಂದು ಎರಡು ಗುಂಪುಗಳಾಗಿ ಕಾರ್ಮಿಕರು ನಿರಂತರ ಶೋಷಣೆಗೆ ಒಳಗಾದಾಗ ರಾಬರ್ಟ್ ಒವೆನ್ ಕಾರ್ಮಿಕರ ಪರವಾಗಿ ಅನೇಕ ಸುಧಾರಣೆಗಳನ್ನು ಮಾಡಿದನು. ಕಾರ್ಮಿಕರಿಗೆ ಕೈತುಂಬ ಸಂಬಳ, ಉತ್ತಮ ಶಿಕ್ಷಣ, ವಸತಿ ಸೌಲಭ್ಯ ಹಾಗೂ ಇತರೆ ಕಾರ್ಮಿಕ ಕಲ್ಯಾಣ ಯೋಜನೆಯನ್ನು ಕಾರ್ಯಗತ ಮಾಡಲು "ಸಹಕಾರ ಗ್ರಾಮ" ಸ್ಥಾಪಿಸಿದ ಕೀರ್ತಿ ರಾಬರ್ಟ್ ಒವೆನ್‌ಗೆ ಸಲ್ಲುತ್ತದೆ.

# ಭಾರತದಲ್ಲಿ ಸಹಕಾರಿ ಚಳುವಳಿ ನಡೆದು ಬಂದ ದಾರಿ

ಸಹಕಾರಿ ಚಳುವಳಿ ನಡೆದು ಬಂದ ದಾರಿಯನ್ನು
4 ವಿಧವಾಗಿ ವಿಂಗಡಿಸಬಹುದು.

1. ಸ್ವಾತಂತ್ರ್ಯ ಪೂರ್ವ
2. ಸ್ವಾತಂತ್ರ್ಯ ನಂತರ
3. ಹೊಸ ಆರ್ಥಿಕ ನೀತಿ ಜಾರಿ ನಂತರ
4. ಸೌಹಾರ್ದ ಸಹಕಾರಿ ಯುಗ.

# ಸ್ವಾತಂತ್ರ್ಯ ಪೂರ್ವ:

1904 ಮಾರ್ಚ್ 25ನೇ ದಿನಾಂಕದಂದು ಅಖಿಲ ಭಾರತ ಸಹಕಾರಿ ಪತ್ತಿನ ಕಾಯ್ದೆಯನ್ನು ಜಾರಿಗೆ ತರಲಾಯಿತು.

* ಭಾರತದ ಪ್ರಥಮ ಕೃಷಿ ಸಹಕಾರ ಸಂಘ ಕರ್ನಾಟಕದ ಅಂದಿನ ಧಾರವಾಡ ಜಿಲ್ಲೆಯ ಗದಗ ತಾಲ್ಲೂಕಿನ ಕಣಗಿನಹಾಳ ಎಂಬ ಗ್ರಾಮದಲ್ಲಿ 1905 ಮೇ 08 ರಂದು ಪ್ರಾರಂಭವಾಯಿತು.

* 1912ರ ತಿದ್ದುಪಡಿ (ವಿವಿಧ ರೀತಿಯ ಸಹಕಾರ ಸಂಸ್ಥೆಗಳ ರಚನೆ)

* 1919ರ ತಿದ್ದುಪಡಿ (ಪ್ರಾಂತೀಯ ವಿಷಯವಾಗಿ ಸಹಕಾರ)

* 1935ರಲ್ಲಿ ಆರ್.ಬಿ.ಐ ಸ್ಥಾಪನೆ.

# ಸ್ವಾತಂತ್ರ್ಯ ನಂತರ

* 1947ರಲ್ಲಿ ಭಾರತಕ್ಕೆ ಸ್ವಾತಂತ್ರ.
* 1950ರಲ್ಲಿ ಗಣರಾಜ್ಯ ಸ್ಥಾಪನೆ.
* ನೂತನ ಸಂವಿಧಾನದಲ್ಲಿ ಸಹಕಾರ ರಾಜ್ಯಗಳ ವಿಷಯ.

ಸಂವಿಧಾನದಲ್ಲಿನ ಅವಕಾಶಗಳು:

* ಅಧಿಕಾರಗಳ ವಿಕೇಂದ್ರಿಕರಣ

(ಕೇಂದ್ರ ಪಟ್ಟಿ, ರಾಜ್ಯ ಪಟ್ಟಿ, ಸಮವರ್ತಿ ಪಟ್ಟಿ)

* ಒಂದೇ ವಿಷಯಕ್ಕೆ ಎರಡು ಕಾಯ್ದೆಯ ಅವಕಾಶಗಳು

## “ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959, ನಿಯಮಗಳು 1960”

ಶ್ರೀ ಎ.ಡಿ. ಗೊರವಾಲಾ ನೇತೃತ್ವದಲ್ಲಿ “ಅಖಿಲ ಭಾರತ ಪತ್ತು ಪರಿಶೀಲನಾ ಸಮಿತಿ” ನೇಮಕ. ಸುದೀರ್ಘ ಅಧ್ಯಯನ ನಂತರ ವರದಿ.“ಭಾರತದಲ್ಲಿ ಸಹಕಾರ ಚಳುವಳಿ ಯಶಸ್ವಿಯಾಗಲಿಲ್ಲ ಆದರೆ ಯಶಸ್ವಿಯಾಗಲೇಬೇಕು” ಎಂದು ತಿಳಿಸಿದರು.

# ಹೊಸ ಆರ್ಥಿಕ ನೀತಿ ಘೋಷಣೆ:

* 1991 ರಲ್ಲಿ ಅಂದಿನ ಕೇಂದ್ರ ಹಣಕಾಸು ಸಚಿವರಾದ ಡಾ. ಮನಮೋಹನ ಸಿಂಗ್‌ರವರು ರಾಷ್ಟ್ರಕ್ಕೆ ಹೊಸ ಆರ್ಥಿಕ ನೀತಿಯನ್ನು ಘೋಷಣೆ ಮಾಡಿದರು.

* ದೇಶದ ಹಾಗೂ ಹೊರ ದೇಶದ ಖಾಸಾಗಿ ಉದ್ದಿಮೆದಾರರು ಉದ್ದಿಮೆಗಳನ್ನು ಪ್ರಾರಂಭಿಸಲು ಮುಕ್ತ ಅವಕಾಶ ನೀಡಲಾಯಿತು.

* ಖಾಸಗೀಕರಣ, ಜಾಗತೀಕರಣ, ಹಾಗೂ ಉದಾರೀಕರಣ ನೀತಿಯನ್ನು ಘೋಷಿಸಲಾಯಿತು.

# ಸೌಹಾರ್ದ ಸಹಕಾರಿ ಯುಗ ಪ್ರಾರಂಭ

ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳು ಈ ಕ್ಷೇತ್ರಕ್ಕೆ ವಿವಿಧ ಯೋಜನೆಗಳಮೂಲಕ ಕೋಟ್ಯಂತರ ರೂಪಾಯಿ ಹಣವನ್ನು, ಶೇರು ಸಬ್ಸಿಡಿ, ಸಹಾಯ ಧನ ಮುಂತಾದ ರೂಪದಲ್ಲಿ ನೀಡಲಾಗಿತ್ತು.

**ಗ್ರಾಮಕ್ಕೊಂದು ಪಂಚಾಯಿತಿ, ಗ್ರಾಮಕ್ಕೊಂದು ಶಾಲೆ ಹಾಗೂ ಗ್ರಾಮಕ್ಕೊಂದು ಸಹಕಾರ ಸಂಘ** ಇವುಗಳು ಸಮುದಾಯ ಅಭಿವೃದ್ಧಿಯ ಮೂರು ಆಧಾರ ಸ್ತಂಭಗಳು ಎಂದೇ ಕರೆಯಲ್ಪಟ್ಟವು. ಅದಕ್ಕಾಗಿಯೇ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸ್ವಾತಂತ್ರ್ಯಾನಂತರ ಕೋಟ್ಯಾಂತರ ರೂಪಾಯಿ ಹಣವನ್ನು ಸಹಕಾರಿ ಕ್ಷೇತ್ರಕ್ಕೆ ಸುರಿಯಲಾಗಿತ್ತು. ಆದರೂ ಸಹಕಾರಿ ಕ್ಷೇತ್ರ ನಿರೀಕ್ಷಿತ ಯಶಸ್ಸು ಸಾಧಿಸಲಿಲ್ಲ. ಈ ಕುರಿತು ಅನೇಕ ವೇದಿಕೆಗಳ ಮೂಲಕ ಚರ್ಚೆ ಆರಂಭವಾಯಿತು. ಸಹಕಾರಿ ಕ್ಷೇತ್ರ ನಿರೀಕ್ಷಿತ ಯಶಸ್ಸು ಸಾಧಿಸಲಿಲ್ಲ ಹಾಗೂ ಸಹಕಾರಿ ರಂಗ ದಾರಿ ತಪ್ಪಿದೆ ಎಂಬ ಸಹಕಾರಿಗಳ ಕೂಗು ದಿನೇ ದಿನೇ ಹೆಚ್ಚುತ್ತಾ ಹೋಯಿತು.

ಇದನ್ನು ಗಮನಿಸಿದ ಕೇಂದ್ರ ಸರ್ಕಾರ 1987ರಲ್ಲಿ ಶ್ರೀ ಅರ್ಧನಾರೀಶ್ವರನ್ ಇವರ ಅಧ್ಯಕ್ಷತೆಯಲ್ಲಿ ಈ ಕುರಿತು ಅಧ್ಯಯನ ನಡೆಸಲು ಸಮಿತಿಯೊಂದನ್ನು ರಚಿಸಿತು. ಈ ಸಮಿತಿಯು ತನ್ನ ವರದಿಯಲ್ಲಿ "ಸರಕಾರದ ಅತಿಯಾದ ಹಸ್ತಕ್ಷೇಪದಿಂದಾಗಿ ದೇಶದಲ್ಲಿ ಸಹಕಾರಿ ಚಳುವಳಿ ವಿಫಲವಾಗಿದೆಯೆಂದು" ಹೇಳಿತು. ಸಹಕಾರ ಚಳುವಳಿ ವಿಫಲವಾದರೂ ಜನಸಾಮಾನ್ಯರು ತಮ್ಮ ಆರ್ಥಿಕ ಏಳ್ಗೆಗಾಗಿ ತಾವೇ ಸ್ವಯಂ ಸ್ಫೂರ್ತಿಯಿಂದ ಭಾಗವಹಿಸುವ ಈ ಆಂದೋಲನ ಯಶಸ್ವಿಯಾಗುವ ಅಗತ್ಯವಿರುವುದನ್ನು ಗುರುತಿಸಿದ ಕೇಂದ್ರ ಯೋಜನಾ ಆಯೋಗ ಸರ್ಕಾರದ ಹಸ್ತಕ್ಷೇಪ ತಡೆಯಬಲ್ಲ ಸದಸ್ಯರಿಗೆ ಹೆಚ್ಚು ಅಧಿಕಾರ ನೀಡುವ ಹಾಗೂ ಅವರ ಸಹಭಾಗಿತ್ವ ಹೆಚ್ಚಿಸುವ ಸಹಕಾರಿ ಸಂಘಗಳಿಗೆ ಚಟುವಟಿಕೆ ನಡೆಸಲು ಮುಕ್ತ ವಾತಾವರಣ ನಿರ್ಮಿಸುವಂತಹ ಮಾದರಿ ಸಹಕಾರಿ ಕಾಯ್ದೆಯನ್ನು ರೂಪಿಸಲು ಚೌಧರಿ ಬ್ರಹ್ಮಪ್ರಕಾಶರ ನೇತೃತ್ವದಲ್ಲಿ ಇನ್ನೊಂದು ಸಮಿತಿಯನ್ನು ನೇಮಿಸಿತು.

ಈ ಸಮಿತಿ 1991ರಲ್ಲಿ ವಿವಿಧ ರಾಜ್ಯಗಳಲ್ಲಿ ಪ್ರಸ್ತುತ ಜಾರಿಯಲ್ಲಿರುವ ಸಹಕಾರಿ ಕಾಯ್ದೆಗಳ ಬಗ್ಗೆ ವಿವರವಾದ ಅಧ್ಯಯನ ನಡೆಸಿ ಒಂದು ಮಾದರಿ ಕಾಯ್ದೆ ರೂಪಿಸಿತು. ಯೋಜನಾ ಆಯೋಗದಿಂದ ಈ ಮಾದರಿ ಸಹಕಾರಿ ಕಾಯ್ದೆಯನ್ನು ಅಳವಡಿಸಿಕೊಳ್ಳಲು ಸಲಹೆ ನೀಡಿ ಎಲ್ಲಾ ರಾಜ್ಯ ಸರ್ಕಾರಗಳಿಗೆ ಕಳುಹಿಸಿತು. ಈ ರೀತಿ ವಿವರವಾದ ಅಧ್ಯಯನದ ಫಲವಾಗಿ ಯೋಜನಾ ಆಯೋಗದವರು ಕಳುಹಿಸಿದ ಮಾದರಿ ಸಹಕಾರಿ ಕಾಯ್ದೆಯನ್ನು ನಮ್ಮ ರಾಜ್ಯದಲ್ಲಿ ಜಾರಿಗೆ ತರಲಾಯಿತು. ಈ ಕಾಯ್ದೆಯೇ "ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆ–1997".

# ಉದ್ದೇಶ ಮತ್ತು ಕಾರಣಗಳ ಹೇಳಿಕೆ

(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)

1. ಸದಸ್ಯರೇ ಸಂಪೂರ್ಣ ಒಡೆತನ ಹೊಂದಿರುವ, ನಿರ್ವಹಿಸುವ ಮತ್ತು ನಿಯಂತ್ರಿಸುವ ಸ್ವಸಹಾಯ ಮತ್ತು ಪರಸ್ಪರ ನೆರವಿನ ಮೇಲೆ ಆಧಾರಿತವಾದ ಸಹಕಾರಿ ತತ್ವಗಳಿಂದ ಮಾರ್ಗದರ್ಶನ ಪಡೆದ, ಜವಾಬ್ದಾರಿಯುತ, ಸ್ಪರ್ಧಾತ್ಮಕ, ಸ್ವಾವಲಂಬಿ ಆರ್ಥಿಕ ಉದ್ಯಮಗಳಾದ ಸಹಕಾರಿಗಳಿಗೆಮಾನ್ಯತೆ ಮತ್ತು ಅವುಗಳ ಸ್ವಯಂ ರಚನೆಗೆ ಪ್ರೋತ್ಸಾಹ ನೀಡುವುದು.

## ಉದ್ದೇಶ ಮತ್ತು ಕಾರಣಗಳ ಹೇಳಿಕೆ

(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)

2. ನೋಂದಣಿ ಮತ್ತು ರದ್ದಿಯಾತಿಗಳನ್ನು ಬಿಟ್ಟು ಉಳಿದಂತೆ ಸಹಕಾರಿಗಳ ಮುಕ್ತ ಕಾರ್ಯಚರಣೆಗೆ ತಡೆಯೊಡ್ಡುವ ಸರ್ಕಾರದ ಎಲ್ಲ ರೀತಿಯ ನಿರ್ಬಂಧಗಳು ಮತ್ತು ನಿಯಂತ್ರಣಗಳು ಮತ್ತು ಹಸ್ತಕ್ಷೇಪವನ್ನು ನಿವಾರಿಸುವುದು.

## ಉದ್ದೇಶ ಮತ್ತು ಕಾರಣಗಳ ಹೇಳಿಕೆ

(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)

# 3. ಪೂರಕ ಸಂಸ್ಥೆಗಳಿಗೆ, ಸಹಕಾರಿಗಳ ನಡುವೆ ಪಾಲುದಾರಿಕೆಗೆ ಮತ್ತು ಸಹಕಾರಿಗಳು ಹಾಗೂ ಇತರೆ ಸಂಸ್ಥೆಗಳ ನಡುವೆ ಸಹೋದ್ಯಮಕ್ಕೆ ಉತ್ತೇಜನ ನೀಡುವುದು;

# ಉದ್ದೇಶ ಮತ್ತು ಕಾರಣಗಳ ಹೇಳಿಕೆ

(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)

4. ಮೇಲೆ ಹೇಳಿದ ಉದ್ದೇಶಗಳ ಮುಂದುವರಿಕೆಯಲ್ಲಿ ಸಹಕಾರಿಗಳು, ಒಕ್ಕೂಟ ಸಹಕಾರಿಗಳು ಮತ್ತು ಸಂಯುಕ್ತ ಸಹಕಾರಿಯನ್ನು ನೋಂದಣಿ ಮಾಡುವುದು.

5. 1959ರ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮದ ಅಡಿಯಲ್ಲಿ ನೋಂದಾಯಿಸಲಾದ ಸಹಕಾರ ಸಂಘಗಳನ್ನು ಪ್ರಸ್ತಾವಿತ ಶಾಸನದ ಅಡಿ ಸಹಕಾರಿಯಾಗಿ ಪರಿವರ್ತಿಸುವುದು.

ಆದ್ದರಿಂದ ವಿಧೇಯಕ.

# ಕರ್ನಾಟಕದಲ್ಲಿ ಮಾದರಿ ಸೌಹಾರ್ದ ಕಾಯ್ದೆ-1997

* ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮದ ಹೆಸರಿನಲ್ಲಿ 1997ರಲ್ಲಿ ವಿಧಾನ ಮಂಡಳದಲ್ಲಿ ಮಂಡನೆ.
* 25 ಮಾರ್ಚ್ 2000ರಂದು ರಾಷ್ಟ್ರಪತಿಗಳ ಅಂಕಿತ.
* 10 ಮೇ 2000ರಂದು ರಾಜ್ಯ ಪತ್ರದಲ್ಲಿ ಮೊದಲ ಬಾರಿಗೆ ಪ್ರಕಟ.
* 1ನೇ ಜನವರಿ 2001ರಿಂದ ಜಾರಿಗೆ

# ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆಯ ಬೆಳವಣಿಗೆ

* ಇದುವರೆಗೆ ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ 2045 ಕ್ಕೂ ಹೆಚ್ಚು ಸಹಕಾರಿಗಳ ನೋಂದಣಿ.

* ಬ್ಯಾಂಕುಗಳು, ಪತ್ತಿನ ಸಹಕಾರಿ ಸಂಸ್ಥೆಗಳು, ಮಾರಾಟ, ಗ್ರಾಹಕ, ನೌಕರರ, ಪ್ರೊಸೆಸ್ಸಿಂಗ್, ಉತ್ಪಾದಕ, ಮಹಿಳಾ ಸ್ವಸಹಾಯ ಹೀಗೆ ವಿವಿಧ ರೀತಿಯ ಸಹಕಾರ ಸಂಸ್ಥೆಗಳ ನೋಂದಣಿ.

ತಮಗೆಲ್ಲ, ಸೌಹಾರ್ದ ಸಹಕಾರಿ ಕ್ಷೇತ್ರಕ್ಕೆ ಸ್ವಾಗತವನ್ನು ಬಯಸುತ್ತ, ಸೌಹಾರ್ದ ಸಹಕಾರಿಯ ಮೂಲಕ ತಮ್ಮ ಸಾಮಾಜಿಕ ಜೀವನವು ಹೆಚ್ಚು ಜನೋಪಯೋಗಿಯಾಗಲೆಂದು ಹಾರೈಸುತ್ತೇನೆ.

# ಧನ್ಯವಾದಗಳು